**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ,**
**ಪಾಂಡವಪುರ**

ದಿನಾಂಕಃ **28.01.2026**

**ಸಿ.ಸಿ.ಸಂ.425/2025**

ಫಿರ್ಯಾದಿಃ ಶ್ರೀ.ಬಾಲು.ವಿ.ಎಂ ಬಿನ್ ಲೇಃ ಮಳ್ಳೇಗೌಡ,
ಸುಮಾರು 31 ವರ್ಷ,
ವಾಸಃ ವಡ್ಡರಹಳ್ಳಿ ಗ್ರಾಮ, ಕಸಬಾ ಹೋಬಳಿ,
ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ.

ಃ ವಿರುದ್ಧ ಃ

ಆರೋಪಿಃ ಶ್ರೀ.ಅನಿಲ್.ಸಿ.ಪಿ ಬಿನ್ ಲೇಃ ಪುಟ್ಟರಾಜು,
ಸುಮಾರು 27 ವರ್ಷ,
ವಾಸಃ ಚಿನಕುರಳಿ ಗ್ರಾಮ, ರಂಗಸ್ಟ್ರೀಟ್ (ಮಾರಮ್ಮನ ದೇವಸ್ಥಾನದ ಹತ್ತಿರ) ಚಿನಕುರಳಿ ಪೋಸ್ಟ್, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ.

ಆರೋಪಣೆ

**ಶ್ರೀಮತಿ. ಪಾರ್ವತಮ್ಮ.ಬಿ., ಬಿ.ಎ., ಎಲ್.ಎಲ್.ಎಂ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ನ್ಯಾಯಾಲಯ, ಪಾಂಡವಪುರ ಆದ ನಾನು ಆರೋಪಿಯಾದ ನಿಮ್ಮನ್ನು ಈ ಕೆಳಕಂಡಂತೆ ಆರೋಪಣೆಗೆ ಒಳಪಡಿಸುವುದೇನೆಂದರೆ,**

**ದಂಡ ಪ್ರಕ್ರಿಯಾ ಸಂಹಿತೆ ಕಲಂಃ 251 ರಡಿಯಲ್ಲಿನ ಆರೋಪ**

ಆರೋಪಿಯಾದ ನೀವು ಪಿರ್ಯಾದುದಾರರ ಕಡೆಯಿಂದ, ಜೂನ್-2024 ನೇ ಇಸವಿಯಲ್ಲಿ ರೂ.3,00,000/- ಗಳ ಹಣವನ್ನು ಸಾಲವಾಗಿ ಪಡೆದಿದ್ದು, ಇದನ್ನು ತಿರುವಳಿ ಮಾಡುವ ಬಗ್ಗೆ ಕರ್ನಾಟಕ ಗ್ರಾಮೀಣ ಬ್ಯಾಂಕ್, ಚಿನಕುರಳಿ ಶಾಖೆಗೆ ಸೇರಿದ, ರೂ.3,00,000/- ಗಳ ಚೆಕ್ ನಂಃ 003601 ರ ದಿನಾಂಕಃ 28.11.2024 ರಂದು ಫಿರ್ಯಾದುದಾರರಿಗೆ ಕೊಟ್ಟಿದ್ದು, ಸದರಿ ಚೆಕ್ ನಲ್ಲಿನ ಹಣವನ್ನು ಪಡೆಯುವ ಬಗ್ಗೆ ಫಿರ್ಯಾದುದಾರರು ಇಂಡಿಯನ್ ಓವರ್ ಸೀಸ್ ಬ್ಯಾಂಕ್, ಕೆನ್ನಾಳು ಶಾಖೆಗೆ ಹಾಜರುಪಡಿಸಿದಾಗ, ಆರೋಪಿಯಾದ ನಿಮ್ಮ ಖಾತೆಯಲ್ಲಿ "Funds insufficient" ಎನ್ನುವ ಕಾರಣದಿಂದ ಸದರಿ ಚೆಕ್ ಅಮಾನ್ಯಗೊಂಡಿದ್ದು, ತದನಂತರ 30 ದಿನಗಳ ಒಳಗಾಗಿ ಪಿರ್ಯಾದುದಾರರು ಆರೋಪಿಯಾದ ನೀಮಗೆ ದಿನಾಂಕ: 11.12.2024 ರಂದು

ನೋಟೀಸ್ ನೀಡಿದ್ದು, ಸದರಿ ನೋಟಿಸ್ ಆರೋಪಿಯಾದ ನಿಮಗೆ ದಿನಾಂಕಃ 12.12.2024 ರಂದು ಖುದ್ದು ಜಾರಿಯಾಗಿರುತ್ತದೆ. ಆರೋಪಿಯಾದ ನೀವು ಪಿರ್ಯಾದುದಾರರ ಹಣವನ್ನು ಮರುಪಾವತಿ ಮಾಡಿರುವುದಿಲ್ಲ. ಆ ಮೂಲಕ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಾಯ್ದೆ-138 ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಪ್ರಶ್ನೆಃ **1** ಃ ಈಗ ನಿಮಗೆ ಓದಿ ಹೇಳಿದ ಆರೋಪದ ಸಾರಾಂಶ ತಿಳಿಯಿತೇ **?**
ಉತ್ತರಃ

ಪ್ರಶ್ನೆಃ **2**ಃ ಈಗ ನೀನು ಓದಿಸಿಕೊಂಡು ತಿಳಿದ ಆರೋಪಕ್ಕೆ ತಪ್ಪೊಪ್ಪುವೆಯೋ ಅಥವಾ ಅಧಿವಿಚಾರಣೆಯಾಗಲೀ ಎನ್ನುವೆಯೋ **?**

ಉತ್ತರಃ

**(**ಆರೋಪಿತನ ಯಥಾವತ್ ಹೇಳಿಕೆಯನ್ನು ಮುಕ್ತ ನ್ಯಾಯಾಲಯದಲ್ಲಿ ಬರೆದುಕೊಳ್ಳಲಾಯ್ತು**.)**

**(ಪಾರ್ವತಮ್ಮ.ಬಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ ನ್ಯಾಯಾಲಯ, ಪಾಂಡವಪುರ.**

ಆರೋಪಿ ಸಹಿಃ